ಆ) ಸದರಿ ರಸ್ತೆಯನ್ನು ಎಷ್ಟು ದಿವಸಗಳಲ್ಲಿ ಪೂರ್ತಿಗೊಳಿಸಲಾಗುವುದು ?

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):-

ಅ) ಹುಬ್ಬಳ್ಳಿ--ಧಾರವಾಡ (ರಾಷ್ಟ್ರೀಯ ಹೆದ್ದಾರಿ ನಂ.4) ಬೈಪಾಸ್ ರಸ್ತೆ ನಿರ್ಮಾಣದ ಪ್ರಥಮ ಹಂತದ 17.425ಕಿ.ಮೀ. ಉದ್ದದ ರಸ್ತೆಯ ಸಿ.ಡಿ. ಕೆಲಸವನ್ನು 1987ರಲ್ಲೂ ಹಾಗೂ ಬಲ್ಲಿ ಡಾಂಬರ್ ಕೆಲಸವನ್ನು 1990ರಲ್ಲೂ ಪ್ರಾರಂಭಿಸಲಾಗಿದೆ. ಈ 17.425 ಕಿ.ಮೀ. ರಸ್ತೆಯ ಸಿ.ಡಿ. ಕೆಲಸವು ಮುಗಿದಿರಿ: ಈ ಕಾಮಗಾರಿಗೆ ಈವರೆಗೆ ಸುಮಾರು 350 ಲಕ್ಷ ರೂ.ಗಳು ವೆಚ್ಚವಾಗಿರುತ್ತದೆ.

ಆ) ಪ್ರಥಮ ಹಂತದ 17.425ಕಿ.ಮೀ. ದೂರದ ಬೈಪಾಸ್ ರಸ್ತೆ ಕೆಲಸವನ್ನು ಡಿಸೆಂಬರ್ 1993ರ ಬೇಳೆಗೆ ಮುಗಿಸುವ ಸಂಭವ ಇದೆ.

ಕೃಷ್ಣ-ಕಾವೇರಿ ಯೋಜನೆಗೆ ಖರ್ಚಾದ ಹಣ

442 (1307): ಶ್ರೀ ಬಾಟಾಳ್ ನಾಗರಾಜ್ (ಚಾಮರಾಜನಗರ):-

ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಆ) ಕೃಷ್ಣಾ ಕಾವೇರಿ ಯೋಜನೆಗಳಿಗೆ ಇದುವರೆಗೆ ಮಾಡಿರುವ ಖರ್ಚೆಷ್ಟು ?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯಮಂತ್ರಿಗಳು):-

ಅ) 1992ರ ಡಿಸಂಬರ್ ಅಂತ್ಯದವರೆಗೆ ಮಾಡಿರುವ ಖರ್ಚು

	(ಕೋಟಿ ರೂ.ಗಳಲ್ಲಿ)
1. ಕೃಷ್ಣಾ ಯೋಜನೆಗಳು	1987.55
2. ಕಾವೇರಿ ಯೋಜನೆಗಳು	1243.23

ಬೆಂಗಳೂರಿನಿಂದ -- ಕಣ್ಣಾನೂರಿಗೆ ರಾಷ್ಟ್ರೀಯ ಹೆದ್ದಾರಿ.

447 (1278): ಶ್ರೀ ಡಿ.ಕೆ. ಶಿವಕುಮಾರ (ಸಾತನೂರು):-

ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರಿನಿಂದ ಕನಕಪುರ - ಮಳವಳ್ಳಿ, ಮೈಸೂರು ಮುಖಾಂತರ ಕಣ್ಣಾನೂರಿಗೆ ರಾಷ್ಟ್ರೀಯ ಹೆದ್ದಾರಿಯನ್ನು ಸ್ಥಾಪಿಸಲು ಸರ್ಕಾರದ ಯೋಜನೆಯಲ್ಲಿದೆಯೇ;

ಆ) ಹಾಗಿದ್ದಲ್ಲಿ, ಈ ಹೆದ್ದಾರಿ ಸ್ಥಾಪಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

ಶ್ರೀ ಕೆ.ಹೆಚ್. ರಂಗನಾಥ್. (ಲೋಕೋಪಯೋಗಿ ಸಚಿವರು):-

ಅ) ಇದೆ.

ಆ) ಪ್ರಸ್ತಾವನೆಗಳನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿದೆ. ಈ ಬಗ್ಗೆ ಶೀಘ್ರ ನಿರ್ಧಿಗಾಗಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುತ್ತಿದೆ.

ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ಪೂರ್ಣಗೊಳಿಸಲು ತಗಲುವ ವೆಚ್ಚ

448 (1328): ಶ್ರೀ ಶಿವಶೇಖರಪ್ಪಗೌಡ ಶಿರವಾಳ, (ಶಹಾಪುರ):-

ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬಚಾವತ್ ಆಯೋಗದ ವರದಿಯ ಪ್ರಕಾರ 2000 ಇಸವಿಯೊಳಗಾಗಿ ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ಪೂರೈಸಲು ಪ್ರತಿವರ್ಷ ತಗಲುವ ವೆಚ್ಚವೆಷ್ಟು ?

ಆ) ಮೇಲ್ಕಂಡ ಯೋಜನೆಯನ್ನು ಪೂರೈಸಲು ಸರ್ಕಾರದವರು ಆದ್ಯತೆ ಮೇಲೆ ಹಣವನ್ನೊದಗಿಸುವರೆ;

ಇ) ಕೃಷ್ಣಾ ಮೇಲ್ದಂಡೆ ಯೋಜನೆಯ ಮೊದಲ ಘಟ್ಟದ ಮೇಲೆ 1992ರ ಮಾರ್ಚ್ ಕೊನೆಯವರೆಗೆ ಆಗಿರುವ ಸೆಕ್ಟ 728.44ಕೋಟಿ ರೂ.ಗಳು. 1-4-92ರಲ್ಲಿದ್ದಂತೆ ಬಾಕಿ ಕಾಮಗಾರಿಗಳ ಅಂದಾಜು ವೆಚ್ಚ ಸುಮಾರು 780ಕೋಟಿ ರೂ. (escalationನೇರಿಲ್ಲ). 1993-94ನೇ ಸಾಲಿನ ಆಯವ್ಯಯದಲ್ಲಿ ಈ ಯೋಜನೆಗ 198.4 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗಿದೆ. ಯೋಜನೆಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವ ದೃಷ್ಟಿಯಿಂದ ಮುಂಬರುವ ಸಾಲುಗಳಲ್ಲಿ ಅಗತ್ಯಕ್ಕೆ ತಕ್ಕಂತೆ ಹಣ ಒದಗಿಸಲಾಗುವುದು. 2ನೇ ಘಟ್ಟದ ಯೋಜನಾ ವರದಿಯು ತಯಾರಿಕೆಯ ಅಂತಿಮ ಹಂತದಲ್ಲಿದ್ದು, ವರದಿಯನ್ನು ತಯಾರಿಸಿದ ನಂತರವೇ ಅಂದಾಜು ವೆಚ್ಚದ ವಿವರ ಗೊತ್ತಾಗುತ್ತದೆ.

ಈ) ಹೌದು.

ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಕಾಮಗಾರಿ ಕೆಲಸಕ್ಕೆ ಹಣದ ಮಂಜೂರಾತಿ

449 (1308): ಶ್ರೀ ಮಾಟಾಳ್ ನಾಗರಾಜ್ (ಚಾಮರಾಜನಗರ):-

ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಕಾಮಗಾರಿ ಕೆಲಸಗಳನ್ನು ಕೈಗೊಳ್ಳಲು 12 ಲಕ್ಷ ರೂ.ಗಳನ್ನು ಸರ್ಕಾರ ಮಂಜೂರು ಮಾಡುವುದಾಗಿ ಭರವಸೆ ನೀಡಿರುವುದು ನಿಜವೆ ?

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):-

ಅ) 1990-91ನೇ ಸಾಲಿನಲ್ಲಿ ಪ್ರತಿ ವಿಧಾನ ಸಭಾಕ್ಷೇತ್ರವಲ್ಲಿ 12 ಲಕ್ಷ ರೂ.ಗಳ ರಸ್ತೆ ಅಭಿವೃದ್ಧಿ ಕಾರ್ಯಕ್ರಮವನ್ನು ಕೈಗೊಳ್ಳಲಾಗಿದ್ದು, 1991-92ರಲ್ಲಿ ಮುಂದುವರೆದಿದ್ದು, 1992-93ನೇ ಸಾಲಿನಲ್ಲಿ ಈ ಕಾರ್ಯಕ್ರಮವು ಮುಕ್ತಾಯವಾಗುತ್ತದೆ.

1992-93ನೇ ಸಾಲಿನಲ್ಲಿ ಮೇಲ್ದರ್ಜೆಗೇರಿಸಿದ ರಸ್ತೆಯ ವಿಸ್ತೀರ್ಣ

451 (1274): ಶ್ರೀ ಮಂಜುನಾಥ್ ಸಿ. ಕುನ್ನೂರ (ಶಿಗ್ಗಾಂವ):-

ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ 1992-93ನೇ ಸಾಲಿನಲ್ಲಿ ಎಷ್ಟು ಕಿ.ಮೀ. ರಸ್ತೆಯನ್ನು ಮೇಲ್ದರ್ಜೆಗೆ ಏರಿಸಲಾಗಿದೆ;

ಆ) ಹಾಗಿದ್ದಲ್ಲಿ, ಧಾರವಾಡ ಜಿಲ್ಲೆಯಲ್ಲಿ ಯಾವ ಯಾವ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಗೆ ತೆಗೆದುಕೊಂಡು ಮೇಲ್ದರ್ಜೆಗೆ ಏರಿಸಲಾಗಿದೆ;

ಇ) ಪದರಿ ರಸ್ತೆಗಳ ಪೈಕಿ ಎಷ್ಟು ಕಿ.ಮೀ. ಕಾಮಗಾರಿಯನ್ನು ತೆಗೆದುಕೊಳ್ಳಲಾಗಿದೆ: ಮತ್ತು ಈಗ ಎಷ್ಟು ಹಣ ಖರ್ಚು ಮಾಡಲಾಗಿದೆ ?

ಶ್ರೀ ಕೆ.ಹೆಚ್. ರಂಗನಾಥ್, (ಲೋಕೋಪಯೋಗಿ ಸಚಿವರು):-